



ಅರುಣ ಪಿ. ಭಟ್ಟ

# ವಾರ ಭವಿಷ್ಯ: 20.01.2022ರಿಂದ 26.01.2022ರವರೆಗೆ




ನೀವು ದೀರ್ಘಕಾಲದವರೆಗೆ ಕಾಯಿಲೆಯೊಂದಿಗೆ ಹೋರಾಡುತ್ತಿದ್ದರೆ, ಈ ವಾರ ಪರಿಹಾರ ಪಡೆಯಬಹುದು. ಹಣ ಸಂಪಾದಿಸಲು ನೀವು ವಿಭಿನ್ನ ವಿಧಾನಗಳನ್ನು ಅಳವಡಿಸಿಕೊಳ್ಳಬಹುದು. ನಿಮ್ಮ ಪ್ರಯತ್ನಗಳು ಯಶಸ್ವಿಯಾಗುತ್ತವೆ. ಕುಟುಂಬದ ಸದಸ್ಯರೊಂದಿಗಿನ ಸಂಬಂಧಗಳು ಸುಧಾರಿಸುತ್ತವೆ ಮತ್ತು ನೀವು ಅವರೊಂದಿಗೆ ಉತ್ತಮ ಸಮಯವನ್ನು ಕಳೆಯುತ್ತೀರಿ. ಶುಭದಿನ **22**. ಗಣಪತಿ ಸುಬ್ರಹ್ಮಣ್ಯ ಜಪ ಮಾಡಿರಿ.




ಒಂದೇ ಸಲಕ್ಕೆ ಹಲವು ಅವಕಾಶಗಳು ನಿಮ್ಮನ್ನು ಹುಡುಕಿಕೊಂಡು ಬರುತ್ತವೆ. ಯಾವುದನ್ನು ಆಯ್ಕೆ ಮಾಡಿಕೊಳ್ಳಬೇಕು ಎಂಬ ಬಗ್ಗೆ ಸ್ಪಷ್ಟತೆ ಇರಲಿ. ಸರ್ಕಾರಿ ನೌಕರರಿಗೆ ವರ್ಗಾವಣೆ ಆದರೂ ಆಗಬಹುದು. ವೈಯಕ್ತಿಕ ಸಂಬಂಧದಲ್ಲಿ ಬಹಳ ಹುಷಾರಾಗಿರಬೇಕು. ಸಂಗಾತಿ ಮಕ್ಕಳಿಗೆ ಬೆಲೆ ಬಾಳುವ ಉಡುಗೊರೆ ನೀಡುವ ಬಗ್ಗೆ ಆಲೋಚನೆ ಮಾಡುತ್ತೀರಿ. ಶುಭದಿನ **21**. ಕಾಲಭೈರವಾಷ್ಟಕ ಸ್ತೋತ್ರ ಪಠಿಸಿರಿ.




ನಿಮ್ಮ ವೈಯಕ್ತಿಕ ವರ್ಚಸ್ಸಿನಿಂದ ಇತರರಿಗೆ ಸಹಾಯ ಮಾಡುತ್ತೀರಿ. ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ಸಿದ್ಧತೆ ನಡೆಸುತ್ತಿದ್ದರೆ ಅದರ ಶ್ರಮದ ಫಲವನ್ನು ಪಡೆಯಲು ಇದು ಸರಿಯಾದ ಕಾಲ. ಹೊಸ ವಸ್ತುವೊಂದನ್ನು ಖರೀದಿ ಮಾಡುವ ಪಕ್ಷದಲ್ಲಿ ಖರೀದಿಸುವ ನಿಮ್ಮ ನಿರ್ಧಾರವನ್ನು ಮುಂದಕ್ಕೆ ಹಾಕುವುದೇ ಉತ್ತಮ. ಆರೋಗ್ಯದಲ್ಲಿ ಸಮಸ್ಯೆಗಳು ಕಾಣಿಸಿಕೊಳ್ಳಬಹುದು. ಶುಭದಿನ **20**. ಶ್ರೀಗೋವಿಂದಾಷ್ಟಕಮ್ ಪಠಿಸಿರಿ.




ನಿಮ್ಮ ಆದಾಯದಲ್ಲಿ ಹೆಚ್ಚಳ ಕಾಣಿಸಿಕೊಳ್ಳಲಿದೆ. ನಿಮ್ಮ ಶ್ರಮಕ್ಕೆ ಒಂದೊಂದಾಗಿ ಪ್ರತಿಫಲ ದೊರೆಯಲು ಆರಂಭವಾಗುತ್ತದೆ. ಸಾಮಾಜಿಕವಾಗಿ ನಿಮ್ಮ ವರ್ಚಸ್ಸು, ಕೀರ್ತಿ ಹೆಚ್ಚಾಗುತ್ತದೆ. ವಿದ್ಯಾರ್ಥಿಗಳಿಗೆ ಈ ವಾರ ಯಶಸ್ಸು ದೊರೆಯುವ ಅವಕಾಶಗಳು ಹೆಚ್ಚಿದೆ. ಹಣಕಾಸಿನ ವ್ಯವಹಾರದಲ್ಲಿ ಅನಿರೀಕ್ಷಿತವಾದ ಬಿಕ್ಕಟ್ಟು ಎದುರಾಗಿ, ಗೊಂದಲಕ್ಕೆ ಒಳಗಾಗುತ್ತೀರಿ. ಶುಭದಿನ **25**. ವಿಷ್ಣುಸಹಸ್ರನಾಮ ಓದಿರಿ.




ಉದ್ಯೋಗ ಅಥವಾ ವ್ಯಾಪಾರ ನಿಮಿತ್ತವಾಗಿ ದೂರ ಪ್ರಯಾಣ ಮಾಡಬೇಕಾದ ಸನ್ನಿವೇಶ ಎದುರಾಗಲಿದೆ. ಹಣ ಹೂಡಿಕೆಯಲ್ಲಿ ಉತ್ತಮ ಲಾಭ ಆಗಲಿದೆ. ಉದ್ಯೋಗ ಸ್ಥಳದಲ್ಲಿ ಸ್ವಲ್ಪ ಮಟ್ಟಿಗೆ ಒತ್ತಡ ಕಾಣಿಸಿಕೊಳ್ಳಬಹುದು. ಆರೋಗ್ಯದಲ್ಲೂ ಏರು ಪೇರಾಗುತ್ತದೆ. ಸೋದರ ಸೋದರಿಯರ ಜತೆಗೆ ಉತ್ತಮ ಬಾಂಧವ್ಯ ಇರುತ್ತದೆ. ಶುಭದಿನ **26**. ದೇವಿ ಆರಾಧನೆ, ಸೌಂದರ್ಯಲಹರಿ ಪಠಿಸಿರಿ.




ವಾರದ ಶುರುವಿನಿಂದಲೇ ಅಂದುಕೊಂಡ ಯೋಜನೆಗಳನ್ನು ಪೂರ್ಣಗೊಳಿಸಲು ಸಾಧ್ಯವಾಗುತ್ತದೆ. ಜತೆಗೆ ಕೆಲಸ ಕಾರ್ಯಗಳಲ್ಲಿ ತೃಪ್ತಿ ಮೂಡುತ್ತದೆ. ನಿಮ್ಮ ಮೇಲಧಿಕಾರಿಗಳಿಗೆ ಕೆಲಸದ ಪ್ರಗತಿ ಬಗ್ಗೆ ವರದಿ ನೀಡುತ್ತೀರಿ. ಆ ಮೂಲಕ ಅವರ ಮೆಚ್ಚುಗೆಯನ್ನು ಪಡೆಯುತ್ತೀರಿ. ಪರಿಣಾಮಕಾರಿಯಾದ ಕಾರ್ಯ ವೈಖರಿಯನ್ನು ಮೆಚ್ಚಿಕೊಳ್ಳುತ್ತಾರೆ. ಶುಭದಿನ **23**. ಲಕ್ಷ್ಮೀ ನಾರಾಯಣ ಹೃದಯ ಪಾರಾಯಣ ಮಾಡಿರಿ.




ಪುಣ್ಯಕ್ಷೇತ್ರ ದರ್ಶನಕ್ಕೆ ತೆರಳುವ ಸಾಧ್ಯತೆ. ಅಗತ್ಯಕ್ಕೆ ತಕ್ಕಂತೆ ಈ ವಾರ ಕೆಲ ನಿಯಮಗಳನ್ನು ಅಳವಡಿಸಿಕೊಳ್ಳಲಿದ್ದೀರಿ. ಇದರಿಂದ ಮಾರುಕಟ್ಟೆಯ ಹಿಡಿತ ಸಾಧಿಸಲು ಸಾಧ್ಯವಾಗುತ್ತದೆ. ಆದರೆ ಇದಕ್ಕಾಗಿ ನೀವು ಹೆಚ್ಚಿನ ಶ್ರಮವನ್ನು ಹಾಕಬೇಕಾಗುತ್ತದೆ. ಕೆಲವು ಕೆಲಸಗಳನ್ನು ಪೂರ್ಣಗೊಳಿಸುವ ನಿಟ್ಟಿನಲ್ಲಿ ನಿಮ್ಮ ಸೋದರ– ಸೋದರಿ ಸಹಾಯಕ್ಕೆ ನಿಲ್ಲುತ್ತಾರೆ. ಶುಭದಿನ **21**. ಆದಿತ್ಯ ಹೃದಯ ಪಠಿಸಿರಿ.




ಕುಟುಂಬ ಸದಸ್ಯರ ಜತೆಗೆ ಹೆಚ್ಚಿನ ಸಮಯ ಕಳೆಯುವ ಸಾಧ್ಯತೆ ಇದೆ. ಹಿಂದೆಂದಿಗಿಂತಲೂ ಈ ವಾರ ಹೆಚ್ಚು ಚಟುವಟಿಕೆಯಿಂದ ನೀವು ಇರಬೇಕಾಗುತ್ತದೆ. ಭೂ ವ್ಯಾಜ್ಯವೊಂಕ್ಕೆ ಶ್ರಮ ಹಾಕಲಿದ್ದೀರಿ. ವಿರೋಧಿ ಪಾಳಯದವರು ಈ ವಿಚಾರದಲ್ಲಿ ಇನ್ನಷ್ಟು ಸಮಸ್ಯೆಗೆ ಎಳೆಯಲಿದ್ದಾರೆ. ಕಾನೂನಿಗೆ ಸಂಬಂಧಿಸಿದ ವಿಚಾರಗಳಲ್ಲಿ ತೊಡಗಿಕೊಳ್ಳಬೇಕಾದ ಅಗತ್ಯ ಕಂಡುಬರುತ್ತದೆ. ಶುಭದಿನ **23**. ಚಂಡಿ ಪಾರಾಯಣ ಮಾಡಿರಿ.




ವಾರದ ಆರಂಭದಿಂದಲೇ ನಿಮ್ಮ ಕೆಲಸಗಳಿಗೆ ವೇಗ ನೀಡುತ್ತೀರಿ. ನಿಮ್ಮ ಕಾರ್ಯ ಯೋಜನೆಗಳನ್ನು ಅಂತಿಮಗೊಳಿಸಲು ಅಧಿಕಾರಿಗಳ ನೆರವು ದೊರೆಯುತ್ತದೆ. ಇದರಿಂದ ನಿಮ್ಮ ಕೆಲಸ ಇನ್ನಷ್ಟು ಪರಿಣಾಮಕಾರಿಯಾಗಿ ಮಾಡಲು ಸಾಧ್ಯವಾಗುತ್ತದೆ. ಆದರೆ ಪರಿಣಾಮಕಾರಿಯಾದ ಕಾರ್ಯ ಅನುಷ್ಠಾನಕ್ಕೆ ಹೆಚ್ಚು ಸಿಬ್ಬಂದಿಯ ಅಗತ್ಯ ಬರುತ್ತದೆ. ಶುಭದಿನ **22**. ಶ್ರೀ ಲಕ್ಷ್ಮೀ ನರಸಿಂಹ ಪಂಚರತ್ನ ಓದಿರಿ.




ಯೋಜನೆಗಳನ್ನು ಅನುಷ್ಠಾನಕ್ಕೆ ತರಲು ಉತ್ಸಾಹದಿಂದ ಕಾರ್ಯ ನಿರ್ವಹಿಸುತ್ತೀರಿ. ನಿಮ್ಮ ಕೆಲಸ– ಕಾರ್ಯಗಳನ್ನು ಪೂರ್ಣಗೊಳಿಸಲು ಅಗತ್ಯ ಇರುವ ಸಲಕರಣೆಗಳನ್ನು ಸ್ಥಳೀಯ ಮಾರುಕಟ್ಟೆಯಿಂದ ಖರೀದಿ ಮಾಡುವ ಸಾಧ್ಯತೆ ಇದೆ. ಆ ಮೂಲಕ ಬೇರೊಬ್ಬರ ಮೇಲಿನ ಅವಲಂಬನೆ ಕಡಿಮೆ ಆಗುತ್ತದೆ. ಆದರೆ ಸಲಕರಣೆಗಳ ಖರೀದಿಗೆ ಹೆಚ್ಚಿನ ಹಣ ಖರ್ಚಾಗಲಿದೆ. ಶುಭದಿನ **21**. ವಿಷ್ಣು ಸಹಸ್ರನಾಮ ಪಠಿಸಿರಿ.




ಆದಾಯದಲ್ಲಿ ಹೆಚ್ಚಳ ಆಗುತ್ತಾ ಹೋಗುತ್ತದೆ. ಆ ಮೂಲಕ ಜೀವನ ಶೈಲಿ ಹಾಗೂ ಜೀವನ ಮಟ್ಟ ಉತ್ತಮಗೊಳ್ಳಲಿದೆ. ಈ ವಾರ ಕೆಲವು ಉಪಯುಕ್ತ ಸಂಪನ್ಮೂಲಗಳನ್ನು ಕ್ರೋಡೀಕರಿಸಲು ಸಾಧ್ಯವಾಗುತ್ತದೆ. ಕೆಲವು ಸಂಗತಿಗಳಲ್ಲಿ ವೇಗವನ್ನು ತರುವುದು ಸವಾಲಾಗಿ ಪರಿಣಮಿಸಲಿದೆ. ವಿವಿಧ ಆದಾಯ ಮೂಲಗಳಿಂದ ಅನುಕೂಲ ಒದಗಿ ಬರಲಿದೆ. ಶುಭದಿನ **24**. ಶಿವಕವಚ ಪಠಣ ಮಾಡಿರಿ.




ವೃತ್ತಿಪರ ಬದುಕಿನಲ್ಲಿ ಹಲವು ಅವಕಾಶಗಳು ದೊರೆಯಲಿವೆ. ಇದರಿಂದ ನಿಮ್ಮ ಉತ್ಸಾಹ ಹೆಚ್ಚಾಗಲಿದೆ. ಈ ಹಿಂದೆ ನಿಮ್ಮನ್ನು ಮಾನಸಿಕವಾಗಿ ಚಿಂತೆಗೆ ಈಡು ಮಾಡಿದ್ದ ವಾತಾವರಣವು ಕರಗಲಿದೆ. ಈ ಅವಧಿಯಲ್ಲಿ ನಿಮ್ಮ ಆರೋಗ್ಯ ಅನುಕೂಲಕರವಾಗಿ ಪರಿಣಮಿಸಲಿದೆ. ಆಹಾರ ಪಥ್ಯವನ್ನು ಅನುಸರಿಸಲಿದ್ದೀರಿ. ಉದ್ಯೋಗದಲ್ಲಿ ಬಡ್ತಿ ಸಿಗುವ ಸಾಧ್ಯತೆ ಇದೆ. ಶುಭದಿನ **25**. ರಾಘವೇಂದ್ರ ಸ್ವಾಮಿ ಭಜನೆ ಮಾಡಿರಿ.